ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/11/ಇಸಿಎಸ್(3)/2021


ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com


ದಿನಾಂಕ:19.11.2022

**ಸುತ್ತೋಲೆ**

ವಿಷಯ: ನವೆಂಬರ್-2022 ರ MAKE UP ಥಿಯರಿ ಪರೀಕ್ಷೆಗಳಿಗೆ (SEE) ಸಂಬಂಧಿಸಿದಂತೆ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳು ಅನುಸರಿಸಬೇಕಾದ ಕ್ರಮಗಳ ಕುರಿತು.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/11/ಇಸಿಎಸ್(3) 2021 ದಿ:08.11.2022

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಯನ್ವಯ ನವೆಂಬರ್-2022 ರ MAKE UP ಥಿಯರಿ (SEE) ಪರೀಕ್ಷೆಗಳು ದಿನಾಂಕ:21.11.2022 ರಿಂದ 30.11.2022 ರವರೆಗೆ ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿವೆ. ಸದರಿ ಪರೀಕ್ಷೆಗಳು ಸುಗಮವಾಗಿ ಮತ್ತು ಸುಸೂತ್ರವಾಗಿ ಜರುಗಲು ಆಯಾ ಪರೀಕ್ಷಾ ಕೇಂದ್ರಕ್ಕೆ ಜೋಡಣೆಯಾಗಿರುವ ಸುತ್ತ ಮುತ್ತಲಿನ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರುಗಳು ಪರೀಕ್ಷಾ ಕೇಂದ್ರಕ್ಕೆ ಅಗತ್ಯವಿರುವ ಪೀಠೋಪಕರಣಗಳು, ಲೇಖನ ಸಾಮಗ್ರಿಗಳು, ಗಣಕ ಯಂತ್ರ ಮುಂತಾದ ಸೌಲಭ್ಯಗಳನ್ನು ಒದಗಿಸಿ ಸೂಕ್ತ ರೀತಿಯಲ್ಲಿ ಸಹಕರಿಸುವಂತೆ ಸೂಚಿಸಲಾಗಿದೆ. ಮುಂದುವರೆದು ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಜೋಡಣೆಗೊಂಡ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಿನ್ಸಿಪಾಲರೊಂದಿಗೆ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಲು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳು – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ

ಪ್ರತಿ: 1. ಪರೀಕ್ಷಾ ಕೇಂದ್ರಗಳ ಉಪಮುಖ್ಯ ಅಧೀಕ್ಷಕರುಗಳಿಗೆ ಸಂಬಂಧಪಟ್ಟ ಪ್ರಾಚಾರ್ಯರುಗಳ ಮೂಲಕ – ಅಗತ್ಯ ಕ್ರಮಕ್ಕಾಗಿ

2. ಮಾನ್ಯ ಆಯುಕ್ತ ಆಪ್ತಶಾಖೆ
3. ನಿರ್ದೇಶಕರ ಆಪ್ತಶಾಖೆ
4. ಕಂಪ್ಯೂಟರ್ ಕೇಂದ್ರ – ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
5. ಇ- ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು